ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ೧೭೫೮ (೧೯೨೫)

ಸದಸ್ಯರ ಹೆಸರು ಶ್ರೀ ನರಸಿಂಹಸ್ವಾಮಿ ಜೆ
(ದೊಡ್ಡಬಳ್ಳಾಪುರ)

ಉತ್ತರಿಸುವ ಸಚಿವರು ಶ್ರೀ ಶಶಿಕಾಂತ ಅಕ್ಕಪ್ಪ ನಾಯಕ
(ತೋಟಗಾರಿಕೆ ಸಚಿವರು)

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ದೊಡ್ಡಬಳ್ಳಾಪುರ ತಾಲ್ಲೂಕಿನ ರೈತರಿಗೆ ಹನಿ ನೀರಾವರಿ ಯೋಜನೆಯಡಿಯಲ್ಲಿ ಶೇಕಡ ೭೫ ರಷ್ಟು ಸಹಾಯಧನ ನೀಡಿ ತಾರತಮ್ಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಇಲ್ಲ, ಬಿಜಾಪುರ ಮತ್ತು ಕೋಲಾರ ಜಿಲ್ಲೆಯನ್ನು ಬಿಟ್ಟು ದೊಡ್ಡಬಳ್ಳಾಪುರ ತಾಲ್ಲೂಕು ಸೇರಿದಂತೆ ಉಳಿದ ಎಲ್ಲಾ ಜಿಲ್ಲೆಗಳಲ್ಲಿ ಶೇ ೭೫ ರಷ್ಟು ಸಹಾಯಧನ ನೀಡಲಾಗುತ್ತಿದೆ
ಆ)	ಸಮೀಪವಿರುವ ಕೋಲಾರ ಜಿಲೆಲಗೆ ಶೇಕಡ ೧೦೦ ರಷ್ಟು ಸಹಾಯ ಧನವನ್ನು ನೀಡುವಂತೆ ದೊಡ್ಡಬಳ್ಳಾಪುರ ತಾಲ್ಲೂಕಿಗೂ ಶೇಕಡ ೧೦೦ ರಷ್ಟು ಸಹಾಯಧನ ನೀಡಿ ರೈತರಿಗೆ ಅನುಕೂಲ ಕಲ್ಪಸುವುದೇ?	ಅಂತಹ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ

ಇ)	ಇಲ್ಲದಿದ್ದಲ್ಲಿ, ಕಾರಣಗಳೇನು ?	ಶೇ ೧೦೦ ಸಹಾಯಧನವನ್ನು ಪ್ರಾಯೋಗಿಕವಾಗಿ ಬಿಜಾಪುರ ಮತ್ತು ಕೋಲಾರ ಜಿಲ್ಲೆಗಳಿಗೆ ನೀಡಲಾಗುತ್ತಿದ್ದು ಇದನ್ನು ಇತರೆ ಜಿಲ್ಲೆಗಳಿಗೂ ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ
ಈ)	ಈ ತಾರತಮ್ಯವನ್ನು ಹೋಗಲಾಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?	ಅಂತಹ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ೧೭೫೯ (೧೯೨೬)

ಸದಸ್ಯರ ಹೆಸರು ಶ್ರೀ ನರಸಿಂಹಸ್ವಾಮಿ ಜೆ (ದೊಡ್ಡಬಳ್ಳಾಪುರ)

ಉತ್ತರಿಸುವ ಸಚಿವರು ಶ್ರೀ ಶಶಿಕಾಂತ ಅಕ್ಕಪ್ಪ ನಾಯಕ್ (ತೋಟಗಾರಿಕೆ ಸಚಿವರು)

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ತೋಟಗಾರಿಕೆ ಇಲಾಖೆಯ ವತಿಯಿಂದ ಹನಿ ನೀರಾವರಿ ಯೋಜನೆಯಡಿಯಲ್ಲಿ ಸಹಾಯಧನ ನೀಡುತ್ತಿರುವುದು ಸಮರ್ಪಕವಾಗಿ ವಿತರಣೆಯಾಗಿದೆಯೇ?	ಹೌದು